# <u>ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಬಾಗಲಕೋಟೆ</u>

## <u>*ಅಧಿಸೂಚನೆ ಸಂಖ್ಯೆ : 01/2022, ದಿನಾಂಕ: 19-03-2022*</u>

ವಿಷಯ : ಶೀಘ್ರಲಿಪಿಗಾರ ಗ್ರೇಡ್-3, ಬೆರಳಚ್ಚುಗಾರರು, ಬೆರಳಚ್ಚು-ನಕಲುಗಾರರು, ಆದೇಶ ಜಾರಿಕಾರರು ಮತ್ತು ಸಿಪಾಯಿ ಹುದ್ದೆಗಳ ನೇರ ನೇಮಕಾತಿ ಕುರಿತು.

ಉಲ್ಲೇಖ :
1) ಗೌರವಾನ್ವಿತ ಕರ್ನಾಟಕ ಘನ ಉಚ್ಚ ನ್ಯಾಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ: ಎಲ್‌ಸಿಎ.2-205/2004, ದಿನಾಂಕ: 02-05-2008, ಎಲ್‌ಸಿಎ-2-54/2011, ದಿನಾಂಕ: 01-10-2011, ಎಲ್‌ಸಿಎ-2-128/2012, ದಿನಾಂಕ: 14-09-2012, ಎಲ್‌ಸಿಎ-2-128/2012, ದಿನಾಂಕ: 13-02-2017, ಎಲ್‌ಸಿಎ-2-128/2012, ದಿನಾಂಕ: 18-09-2018, ಎಲ್‌ಸಿಎ-2-128/2012, ದಿನಾಂಕ: 21-12-2019, ಡಿಜೆಎ-2(ಎಲ್‌ಸಿಎ-2) 128/2012 ದಿನಾಂಕ: 27-01-2022.
2) ಸರ್ಕಾರಿ ಆದೇಶ ಸಂಖ್ಯೆ ಲಾ 94 ಎಲ್‌ಸಿಇ 2018, ದಿನಾಂಕ: 05-11-2020 (ಕುಟುಂಬ ನ್ಯಾಯಾಲಯಕ್ಕೆ ಬೆರಳಚ್ಚುಗಾರ ಹುದ್ದೆಯು ಮಂಜೂರಾದ ಬಗ್ಗೆ).
3) ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು ಹಾಗೂ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ ನೇಮಕಾತಿ) ನಿಯಮಗಳು 1977.
4) ಕರ್ನಾಟಕ ಅಧೀನ ನ್ಯಾಯಾಲಯ (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) ನಿಯಮಗಳು 1982 (ತಿದ್ದುಪಡಿ) ನಿಯಮಗಳು, 2007 ಮತ್ತು 2021.

**- 00000 -**

ಬಾಗಲಕೋಟೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ನ್ಯಾಯಾಲಯಗಳಲ್ಲಿ ಪ್ರಸ್ತುತ ಖಾಲಿ ಇರುವ "ಶೀಘ್ರಲಿಪಿಗಾರರು ಗ್ರೇಡ್-3, ಬೆರಳಚ್ಚುಗಾರರ, ಬೆರಳಚ್ಚು-ನಕಲುಗಾರರ, ಆದೇಶ ಜಾರಿಕಾರರ ಮತ್ತು ಸಿಪಾಯಿ" ಹುದ್ದೆಗಳಿಗಾಗಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ **(Online)** ಮೂಲಕ ಅರ್ಜಿಗಳನ್ನು ಆಹ್ವಾನಿಸಿದ್ದು, ಆಸಕ್ತಿಯುಳ್ಳ ಅರ್ಹ ಅಭ್ಯರ್ಥಿಗಳು ಬಾಗಲಕೋಟೆ ಜಿಲ್ಲಾ ನ್ಯಾಯಾಲಯದ ಜಾಲತಾಣ (website) **https://districts.ecourts.gov.in/bagalkot-onlinerecruitment** ಈ ಲಿಂಕನ್ನು ಬಳಸಿಕೊಳ್ಳುವುದರ ಮೂಲಕ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

| | |
|---|---|
| ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | 21-03-2022 |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 21-04-2022<br>ರಾತ್ರಿ 11-59 ಗಂಟೆಯವರೆಗೆ ಮಾತ್ರ |
| ಭಾರತೀಯ ಸ್ಟೇಟ್ ಬ್ಯಾಂಕ್‌ನಲ್ಲಿ ಚಲನ್ ಮೂಲಕ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 22-04-2022 |

*1) __ಶೀಘ್ರಲಿಪಿಗಾರರು ಗ್ರೇಡ್-3 ಹುದ್ದೆಗಳು – 13__*

***ವೇತನ ಶ್ರೇಣಿ :*** *27650-650-29600-750-32600-850-36000-950-39800*
*1100-46400-1250-52650*

| ಕ್ರ. ಸಂ | ಹುದ್ದೆ | ಮೀಸಲಾತಿ | ವರ್ಗೀಕರಣ | | | | |
|---|---|---|---|---|---|---|---|
| | | | ಮಹಿಳೆ | ಗ್ರಾಮೀಣ | ಸಾಮಾನ್ಯ | ಮಾಜಿ ಸೈನಿಕ | ಒಟ್ಟು |
| 1 | ಶೀಘ್ರಲಿಪಿಗಾರರು ಗ್ರೇಡ್-3 | ಸಾಮಾನ್ಯ ಅಭ್ಯರ್ಥಿ | 1 | 2 | 2 | 1 | 06 |
| | | ಪರಿಶಿಷ್ಟ ಜಾತಿ | - | 1 | 1 | 1 | 03 |
| | | ಪ್ರವರ್ಗ-1 | - | 1 | - | - | 01 |
| | | ಪ್ರವರ್ಗ-2ಎ | - | 1 | 1 | - | 02 |
| | | ಪ್ರವರ್ಗ-2ಬಿ | - | 1 | - | - | 01 |
| | | **ಒಟ್ಟು** | **1** | **6** | **4** | **2** | **13** |

*2) __ಬೆರಳಚ್ಚುಗಾರರ ಹುದ್ದೆಗಳು – 02__*

***ವೇತನ ಶ್ರೇಣಿ :*** *21400-500-22400-550-24600-600-27000-650-29600*
*750-32600-850-36000-950-39800-1100-42000*

| ಕ್ರ. ಸಂ | ಹುದ್ದೆ | ಮೀಸಲಾತಿ | ವರ್ಗೀಕರಣ | | | | | | |
|---|---|---|---|---|---|---|---|---|---|
| | | | ಮಹಿಳೆ | ಗ್ರಾಮೀಣ | ಸಾಮಾನ್ಯ | ಅಂಗವಿಕಲ | ಮಾಜಿ ಸೈನಿಕ | ಯೋಜನಾ ನಿರಾಶ್ರಿತ | ಒಟ್ಟು |
| 1 | ಬೆರಳಚ್ಚುಗಾರರು | ಸಾಮಾನ್ಯ ಅಭ್ಯರ್ಥಿ | - | - | 1 | - | - | - | 01 |
| | | ಪ್ರವರ್ಗ-2ಎ | - | - | 1 | - | - | - | 01 |
| | | **ಒಟ್ಟು** | **-** | **-** | **2** | **-** | **-** | **-** | **02** |

*3) __ಬೆರಳಚ್ಚು-ನಕಲುಗಾರರ ಹುದ್ದೆಗಳು – 01__*

***ವೇತನ ಶ್ರೇಣಿ :*** *21400-500-22400-550-24600-600-27000-650-29600*
*750-32600-850-36000-950-39800-1100-42000*

| ಕ್ರ. ಸಂ | ಹುದ್ದೆ | ಮೀಸಲಾತಿ | ವರ್ಗೀಕರಣ | | | | | | |
|---|---|---|---|---|---|---|---|---|---|
| | | | ಮಹಿಳೆ | ಗ್ರಾಮೀಣ | ಸಾಮಾನ್ಯ | ಅಂಗವಿಕಲ | ಮಾಜಿ ಸೈನಿಕ | ಯೋಜನಾ ನಿರಾಶ್ರಿತ | ಒಟ್ಟು |
| 1 | ಬೆರಳಚ್ಚು-ನಕಲುಗಾರ | ಪ್ರವರ್ಗ-2ಎ | 1 | - | - | - | - | - | 1 |
| | | **ಒಟ್ಟು** | **1** | **-** | **-** | **-** | **-** | **-** | **1** |

*4) <u>ಆದೇಶ ಜಾರಿಕಾರರ ಹುದ್ದೆಗಳು – 01</u>*

***ವೇತನ ಶ್ರೇಣಿ :*** *19950-450-20400-500-22400-550-24600-600-27000*
*650-29600-750-32600-850-36000-950-37900*

| ಕ್ರ. ಸಂ | ಹುದ್ದೆ | ಮೀಸಲಾತಿ | ವರ್ಗೀಕರಣ | | | | | | |
|---|---|---|---|---|---|---|---|---|---|
| | | | ಮಹಿಳೆ | ಗ್ರಾಮೀಣ | ಸಾಮಾನ್ಯ | ಅಂಗವಿಕಲ | ಕನ್ನಡ ಮಾಧ್ಯಮ | ಮಾಜಿ ಸೈನಿಕ | ಒಟ್ಟು |
| 1 | ಆದೇಶ-ಜಾರಿಕಾರ | ಸಾಮಾನ್ಯ ಅಭ್ಯರ್ಥಿ | - | - | - | - | - | 1 | 1 |
| | | ಒಟ್ಟು | **-** | **-** | **-** | **-** | **-** | **1** | **1** |

*5) <u>ಸಿಪಾಯಿ ಹುದ್ದೆಗಳು – 37</u>*

***ವೇತನ ಶ್ರೇಣಿ :*** *17000-400-18600-450-20400-500-22400-550-24600*
*600-27000-650-28950*

| ಕ್ರ. ಸಂ | ಹುದ್ದೆ | ಮೀಸಲಾತಿ | ವರ್ಗೀಕರಣ | | | | | | | |
|---|---|---|---|---|---|---|---|---|---|---|
| | | | ಮಹಿಳೆ | ಗ್ರಾಮೀಣ | ಸಾಮಾನ್ಯ | ಅಂಗವಿಕಲ | ಮಾಜಿ ಸೈನಿಕ | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತ | ಒಟ್ಟು |
| 1 | ಸಿಪಾಯಿ | ಸಾಮಾನ್ಯ ಅಭ್ಯರ್ಥಿ | 2 | 5 | 6 | 1** | 2 | 1 | 1 | 18 |
| | | ಪರಿಶಿಷ್ಟ ಜಾತಿ | | 1 | 2 | | | 1 | 1 | 05 |
| | | ಪರಿಶಿಷ್ಟ ಪಂಗಡ | | | | 1* | | | | 01 |
| | | ಪ್ರವರ್ಗ-1 | | | 1 | | | | | 01 |
| | | ಪ್ರವರ್ಗ-2ಎ | | 2 | 2 | | | 1 | 1 | 06 |
| | | ಪ್ರವರ್ಗ-2ಬಿ | | | 1 | 1* | | | | 02 |
| | | ಪ್ರವರ್ಗ-3ಎ | | | 1 | 1* | | | | 02 |
| | | ಪ್ರವರ್ಗ-3ಬಿ | | 1 | 1 | | | | | 02 |
| | | ಒಟ್ಟು | **2** | **9** | **14** | **4** | **2** | **3** | **3** | **37** |

* ಅಂಧ ಮತ್ತು ದೃಷ್ಟಿದೋಷವುಳ್ಳವರಿಗೆ ಮಾತ್ರ

** ಕಿವುಡತನ ಮತ್ತು ಶ್ರವಣದೋಷವುಳ್ಳವರಿಗೆ ಮಾತ್ರ

*1) ಕನಿಷ್ಠ ಶೈಕ್ಷಣಿಕ ವಿದ್ಯಾರ್ಹತೆ :-*

| ಕ್ರ ಸಂ | ಹುದ್ದೆ | ಕನಿಷ್ಠ ಶೈಕ್ಷಣಿಕ ವಿದ್ಯಾರ್ಹತೆ |
|---|---|---|
| 01 | ಶೀಘ್ರಲಿಪಿಗಾರರು ಗ್ರೇಡ್-3 | 1) ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿಯ ಕಮರ್ಷಿಯಲ್ ಪ್ರ್ಯಾಕ್ಟಿಸ್ 3 ವರ್ಷಗಳ ಡಿಪ್ಲೋಮಾ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.<br>2) ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ನಡೆಸಲಾದ ಹಿರಿಯ ಕನ್ನಡ ಮತ್ತು ಆಂಗ್ಲ ಶೀಘ್ರಲಿಪಿ ಹಾಗೂ ಹಿರಿಯ ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ಕಮರ್ಷಿಯಲ್ ಪ್ರ್ಯಾಕ್ಟಿಸ್ 3 ವರ್ಷಗಳ ಡಿಪ್ಲೋಮಾ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ. |
| 02 | ಬೆರಳಚ್ಚುಗಾರರು | 1) ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿಯ ಕಮರ್ಷಿಯಲ್ ಪ್ರ್ಯಾಕ್ಟಿಸ್ 3 ವರ್ಷಗಳ ಡಿಪ್ಲೋಮಾ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.<br>2) ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ನಡೆಸಲಾದ ಹಿರಿಯ ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ಸೆಕ್ರೆಟರಿಯಲ್ ಪ್ರ್ಯಾಕ್ಟಿಸ್ 3 ವರ್ಷಗಳ ಡಿಪ್ಲೋಮಾ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ. |
| 03 | ಬೆರಳಚ್ಚು-ನಕಲುಗಾರರು | 1) ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.<br>2) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಿಂದ ನಡೆಸಲಾದ ಕಿರಿಯ ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ. |
| 04 | ಆದೇಶ ಜಾರಿಕಾರರು | 1) ಎಸ್ಎಸ್ಎಲ್ಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ. |
| 05 | ಸಿಪಾಯಿ | 1) 10ನೇ ತರಗತಿಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.<br>2) ಕನ್ನಡ ಓದಲು ಮತ್ತು ಬರೆಯಲು ತಿಳಿದಿರಬೇಕು. |

*2) ವಯೋಮಿತಿ :-*

ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಈ ಕೆಳಕಂಡ ವಯೋಮಿತಿಯನ್ನು ಹೊಂದಿರತಕ್ಕದ್ದು.

| ಕ್ರಮ ಸಂಖ್ಯೆ | ಅಭ್ಯರ್ಥಿಯ ಪ್ರವರ್ಗ | ಕನಿಷ್ಠ ವಯೋಮಿತಿ | ಗರಿಷ್ಠ ವಯೋಮಿತಿ |
|---|---|---|---|
| 1 | ಸಾಮಾನ್ಯ ವರ್ಗ | 18 ವರ್ಷಗಳು | 35 ವರ್ಷಗಳು |
| 2 | ಪ್ರವರ್ಗ 2ಎ, 2ಬಿ, 3ಎ, 3ಬಿ | | 38 ವರ್ಷಗಳು |
| 3 | ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡ : ಪ್ರವರ್ಗ-1 | | 40 ವರ್ಷಗಳು |

ಸರಕಾರಿ ಸೇವೆಯಲ್ಲಿರುವವರಿಗೆ, ವಿಧವೆಯರಿಗೆ, ಮಾಜಿ ಸೈನಿಕರಿಗೆ ಮತ್ತು ಅಂಗವಿಕಲರಿಗೆ ನಿಯಮಗಳ ಅನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವದು.

*3) ನಿಗದಿಪಡಿಸಿದ ಅರ್ಜಿ ಶುಲ್ಕ :-*

| | |
|---|---|
| ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ | *ರೂ. 300-00* |
| ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಸೇರಿದ ಅಭ್ಯರ್ಥಿಗಳಿಗೆ | *ರೂ. 150-00* |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಮತ್ತು ಅಂಗವಿಕಲ ಅಭ್ಯರ್ಥಿಗಳಿಗೆ | *ಶುಲ್ಕ ವಿನಾಯಿತಿ ಇರುತ್ತದೆ.* |

ನಿಗದಿತ ಶುಲ್ಕವನ್ನು ನ್ಯಾಯಾಲಯದ ಜಾಲತಾಣ (website) **https://districts.ecourts.gov.in/bagalkot-onlinerecruitment** ನೇದ್ದರಲ್ಲಿ ನೀಡಲಾದ ಲಿಂಕ್ ಮೂಲಕ ಭಾರತೀಯ ಸ್ಟೇಟ್ ಬ್ಯಾಂಕ್‌ನ State Bank Collect ಮೂಲಕ Online payment through net banking / credit card / debit card / challan download ಸೌಲಭ್ಯದ ಮೂಲಕ ಪಾವತಿಸತಕ್ಕದ್ದು. ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿ ಮಾಡಲು ಇಚ್ಛಿಸದ ಅಭ್ಯರ್ಥಿಗಳು ಚಲನ್ ಪ್ರತಿಯನ್ನು ಅಧಿಕೃತ ಜಾಲತಾಣದಿಂದ ಡೌನ್‌ಲೋಡ್ ಮಾಡಿ ಅದರ ಮುದ್ರಿತ ಪ್ರತಿಯನ್ನು ಪಡೆದುಕೊಂಡು ಭಾರತೀಯ ಸ್ಟೇಟ್ ಬ್ಯಾಂಕ್‌ನ ಯಾವುದೇ ಶಾಖೆಗೆ ಹಾಜರಪಡಿಸಿ ಶುಲ್ಕವನ್ನು ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ ಡಿಮ್ಯಾಂಡ್ ಡ್ರಾಫ್ಟ್ / ಪೋಸ್ಟಲ್ ಆರ್ಡರ್ / ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

***4) ಆಯ್ಕೆಯ ವಿಧಾನ :-***

1) ಶೀಘ್ರಲಿಪಿಗಾರರ ಹುದ್ದೆಗೆ ಒಂದು ನಿಮಿಷಕ್ಕೆ 120 ಶಬ್ದಗಳಂತೆ 5 ನಿಮಿಷಗಳ ಉಕ್ತ ಲೇಖನವನ್ನು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ನೀಡಲಾಗುವದು. ಅದನ್ನು ಲಿಪ್ಯಂತರಗೊಳಿಸಿ, ಬೆರಳಚ್ಚು ಮಾಡಲು 45 ನಿಮಿಷಗಳ ಕಾಲಾವಕಾಶ ನೀಡಲಾಗುವದು. ಇದಕ್ಕೆ 100 ಗರಿಷ್ಟ ಅಂಕಗಳನ್ನು ನಿಗದಿಪಡಿಸಿದ್ದು, ಸಂದರ್ಶನಕ್ಕೆ ಅರ್ಹತೆ ಹೊಂದಲು ಕನಿಷ್ಟ 50 ಅಂಕಗಳನ್ನು ಪಡೆಯಬೇಕು. ಅಭ್ಯರ್ಥಿಯು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ, ಹಿರಿಯ ಕನ್ನಡ ಮತ್ತು ಆಂಗ್ಲ ಬೆರಳಚ್ಚು, ಶೀಘ್ರಲಿಪಿ ಪರೀಕ್ಷೆಗಳಲ್ಲಿ ಮತ್ತು ಈ ಪ್ರಾಧಿಕಾರ ನಡೆಸುವ ಶೀಘ್ರಲಿಪಿ ಹಾಗೂ ಬೆರಳಚ್ಚು ಪರೀಕ್ಷೆಗಳಲ್ಲಿ ಪಡೆದ ಅಂಕಗಳ ಸರಾಸರಿ ಆಧಾರದ ಮೇಲೆ ಒಂದು ಹುದ್ದೆಗೆ 5 ರಂತೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವದು. ಸಂದರ್ಶನಕ್ಕೆ ಒಟ್ಟು 5 ಅಂಕಗಳನ್ನು ನಿಗದಿಪಡಿಸಲಾಗಿದೆ. ಅಭ್ಯರ್ಥಿಯು ಹುದ್ದೆಗೆ ನಿಗದಿಪಡಿಸಿದ ಕನಿಷ್ಟ ವಿದ್ಯಾರ್ಹತೆಯಲ್ಲಿ ಪಡೆದ ಅಂಕಗಳು, ಈ ಪ್ರಾಧಿಕಾರವು ನಡೆಸಲಾದ ಕನ್ನಡ ಮತ್ತು ಆಂಗ್ಲ ಶೀಘ್ರಲಿಪಿ ಹಾಗೂ ಬೆರಳಚ್ಚು ಪರೀಕ್ಷೆಯಲ್ಲಿ ಪಡೆದ ಅಂಕಗಳು ಮತ್ತು ಸಂದರ್ಶನದಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆಮಾಡಲಾಗುವದು.

2) ಬೆರಳಚ್ಚುಗಾರರ ಹುದ್ದೆಗಳಿಗೆ ಬೆರಳಚ್ಚು ಮಾಡಲು ಉಕ್ತ ಲೇಖನವನ್ನು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ನೀಡಲಾಗುವದು. ಇದಕ್ಕೆ 100 ಗರಿಷ್ಠ ಅಂಕಗಳನ್ನು ನಿಗದಿಪಡಿಸಿದ್ದು, ಅರ್ಹತೆ ಹೊಂದಲು ಕನಿಷ್ಠ 50 ಅಂಕಗಳನ್ನು ಪಡೆಯಬೇಕು. ಅಭ್ಯರ್ಥಿಯು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ, ಹಿರಿಯ ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪರೀಕ್ಷೆಗಳಲ್ಲಿ ಹಾಗೂ ಈ ಪ್ರಾಧಿಕಾರ ನಡೆಸುವ ಬೆರಳಚ್ಚು ಪರೀಕ್ಷೆಗಳಲ್ಲಿ ಪಡೆದ ಅಂಕಗಳ ಸರಾಸರಿ ಆಧಾರದ ಮೇಲೆ ಒಂದು ಹುದ್ದೆಗೆ 1 : 5 ಅನುಪಾತದಂತೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವದು. ಅಭ್ಯರ್ಥಿಯು ಹುದ್ದೆಗೆ ನಿಗದಿಪಡಿಸಿದ ಕನಿಷ್ಠ ವಿದ್ಯಾರ್ಹತೆಯಲ್ಲಿ ಪಡೆದ ಅಂಕಗಳು, ಈ ಪ್ರಾಧಿಕಾರವು ನಡೆಸುವ ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪರೀಕ್ಷೆಯಲ್ಲಿ ಪಡೆದ ಅಂಕಗಳು ಹಾಗೂ ಸಂದರ್ಶನದಲ್ಲಿ ಪಡೆದ ಅಂಕಗಳ ಸರಾಸರಿ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆಮಾಡಲಾಗುವದು.

3) ಬೆರಳಚ್ಚು-ನಕಲುಗಾರರ ಹುದ್ದೆಗಳಿಗೆ ಬೆರಳಚ್ಚು ಮಾಡಲು ಉಕ್ತ ಲೇಖನವನ್ನು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ನೀಡಲಾಗುವದು. ಇದಕ್ಕೆ 100 ಗರಿಷ್ಠ ಅಂಕಗಳನ್ನು ನಿಗದಿ ಪಡಿಸಿದ್ದು, ಅರ್ಹತೆ ಹೊಂದಲು ಕನಿಷ್ಠ 50 ಅಂಕಗಳನ್ನು ಪಡೆಯಬೇಕು. ಅಭ್ಯರ್ಥಿಯು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ, ಕಿರಿಯ ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪರೀಕ್ಷೆಗಳಲ್ಲಿ ಹಾಗೂ ಈ ಪ್ರಾಧಿಕಾರ ನಡೆಸುವ ಬೆರಳಚ್ಚು ಪರೀಕ್ಷೆಗಳಲ್ಲಿ ಪಡೆದ ಅಂಕಗಳ ಸರಾಸರಿ ಆಧಾರದ ಮೇಲೆ ಒಂದು ಹುದ್ದೆಗೆ 1 : 5 ಅನುಪಾತದಂತೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವದು. ಅಭ್ಯರ್ಥಿಯು ಹುದ್ದೆಗೆ ನಿಗದಿಪಡಿಸಿದ ಕನಿಷ್ಠ ವಿದ್ಯಾರ್ಹತೆಯಲ್ಲಿ ಪಡೆದ ಅಂಕಗಳು, ಈ ಪ್ರಾಧಿಕಾರವು ನಡೆಸುವ ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪರೀಕ್ಷೆಯಲ್ಲಿ ಪಡೆದ ಅಂಕಗಳು ಹಾಗೂ ಸಂದರ್ಶನದಲ್ಲಿ ಪಡೆದ ಅಂಕಗಳ ಸರಾಸರಿ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆಮಾಡಲಾಗುವದು.

4) ಆದೇಶ ಜಾರಿಕಾರರ ಹುದ್ದೆಗಳಿಗೆ ಅಭ್ಯರ್ಥಿಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಒಂದು ಹುದ್ದೆಗೆ 1:25 ಅನುಪಾತದಂತೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನಕ್ಕೆ ಒಟ್ಟು 10 ಅಂಕಗಳನ್ನು ನಿಗದಿ ಪಡಿಸಲಾಗಿದೆ. ಸಂದರ್ಶನದಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಅಭ್ಯರ್ಥಿಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಸಂದರ್ಶನಕ್ಕೆ ಕರೆಯಲು ಮಾತ್ರ ಪರಿಗಣಿಸಲಾಗುವುದು.

5) ಸಿಪಾಯಿ ಹುದ್ದೆಗಳಿಗೆ ಅಭ್ಯರ್ಥಿಗಳು 10 ನೇ ತರಗತಿಯಲ್ಲಿ ಪಡೆದ ಸರಾಸರಿ ಅಂಕಗಳ ಆಧಾರದ ಮೇಲೆ ಒಂದು ಹುದ್ದೆಗೆ 1 : 10 ಅನುಪಾತದಂತೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನಕ್ಕೆ ಒಟ್ಟು 10 ಅಂಕಗಳನ್ನು ನಿಗಧಿಪಡಿಸಲಾಗಿದೆ. ಸಂದರ್ಶನದಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಅಭ್ಯರ್ಥಿಗಳು 10 ನೇ ತರಗತಿಯಲ್ಲಿ ಪಡೆದ ಅಂಕಗಳನ್ನು ಸಂದರ್ಶನಕ್ಕೆ ಕರೆಯಲು ಮಾತ್ರ ಪರಿಗಣಿಸಲಾಗುವುದು.

6) ಅಭ್ಯರ್ಥಿಗಳ ಆಯ್ಕೆಯನ್ನು ಕರ್ನಾಟಕ ಅಧೀನ ನ್ಯಾಯಾಲಯಗಳು (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) ನಿಯಮಗಳು 1982 (ತಿದ್ದುಪಡಿ) ನಿಯಮಗಳು 2007 ಮತ್ತು 2021 ರಂತೆ ಮಾಡಲಾಗುವದು. ಆಯ್ಕೆಯಾದ ಅಭ್ಯರ್ಥಿಗಳು ನೇಮಕಾತಿ ನಿಯಮಗಳಂತೆ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯನ್ನು ಪೂರೈಸಬೇಕಾಗುವದು ಮತ್ತು ಕಾಲಕಾಲಕ್ಕೆ ನಿರ್ಧಿಷ್ಟಪಡಿಸಲಾಗುವ ವಿವಿಧ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕಾಗುವದು.

***<u>5) ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ವಿಧಾನ</u> :-***

1) ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸುವ ಮೊದಲು ಈ ಕೆಳಗೆ ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಕಡ್ಡಾಯವಾಗಿ ಓದಿಕೊಳ್ಳತಕ್ಕದ್ದು ಮತ್ತು ತಪ್ಪಾಗದಂತೆ ನೋಡಿಕೊಳ್ಳತಕ್ಕದ್ದು. ಸರಿಯಾದ ಮಾಹಿತಿ ನೀಡದೇ ಇರುವ ಹಾಗೂ ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

2) ಅಭ್ಯರ್ಥಿಗಳು ಒಮ್ಮೆ ತಮ್ಮ ಅರ್ಜಿಯಲ್ಲಿ ನಮೂದಿಸಿದ ಜನ್ಮ ದಿನಾಂಕ, ವಿದ್ಯಾರ್ಹತೆ, ಮೀಸಲಾತಿ ಹಾಗೂ ವಯೋಮಿತಿ ಸಡಿಲಿಕೆ, ಇತ್ಯಾದಿ ವಿವರಗಳಲ್ಲಿ ಯಾವುದೇ ಬದಲಾವಣೆಗೆ ತಂತ್ರಾಂಶದಲ್ಲಿ ಅವಕಾಶ ಇಲ್ಲದೇ ಇರುವುದರಿಂದ, ಈ ಕುರಿತಂತೆ ತದನಂತರದಲ್ಲಿ ಬರುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.

3) ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಮಿಂಚಂಚೆ (ಇ-ಮೇಲ್) ವಿಳಾಸ ಹೊಂದಿದ್ದಲ್ಲಿ ನಮೂದಿಸುವುದು.

4) ಅಭ್ಯರ್ಥಿಯು ಇತ್ತೀಚಿನ ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

(ಅ) 50 ಕೆಬಿ ಗಾತ್ರದ 5 ಸೆಂ.ಮೀ. x 3.6 ಸೆಂ.ಮೀ. ಅಳತೆಯುಳ್ಳ ಇತ್ತೀಚಿನ ಬಿಳಿಯ ಹಿನ್ನೆಲೆಯುಳ್ಳ ಭಾವಚಿತ್ರವನ್ನು .jpg ನಮೂನೆಯಲ್ಲಿ ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡತಕ್ಕದ್ದು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡತಕ್ಕದ್ದಲ್ಲ).

(ಆ) 26 ಕೆಬಿ ಗಾತ್ರದ 2.5 ಸೆಂ.ಮೀ. x 7.5 ಸೆಂ.ಮೀ. ಅಳತೆಯುಳ್ಳ ಬಿಳಿ ಹಾಳೆಯ ಮೇಲೆ ಕಪ್ಪು ಬಣ್ಣದ ಶಾಯಿಯ ಬಾಲ್‌ಪಾಯಿಂಟ್ ಪೆನ್ನಿನಿಂದ ಸಹಿ ಮಾಡಿ (.jpg ನಮೂನೆಯಲ್ಲಿ) ಅರ್ಜಿಗೆ ಅಪ್‌ಲೋಡ್ ಮಾಡತಕ್ಕದ್ದು.

5) ಅಭ್ಯರ್ಥಿಯು ಆನ್‌ಲೈನ್ ಅರ್ಜಿಯಲ್ಲಿ ಕೇಳಲಾದ ಎಲ್ಲಾ ಅಂಕಣಗಳನ್ನು ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಕೊಳ್ಳುವುದು. ನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ಭರಣಾ ಮಾಡಿದ ಬಗ್ಗೆ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಸಂದರ್ಶನ / ದಾಖಲಾತಿ ಪರಿಶೀಲನೆ / ಈ ಕಚೇರಿಯು ಅಪೇಕ್ಷಿಸಿದ ಸಮಯದಲ್ಲಿ ಹಾಜರಪಡಿಸತಕ್ಕದ್ದು.

6) ಅಭ್ಯರ್ಥಿಯು ಅರ್ಜಿ ಶುಲ್ಕವನ್ನು ಪಾವತಿಸಿದ ಬಗ್ಗೆ ಖಚಿತಪಡಿಸಲು, ಶುಲ್ಕ ಪಾವತಿಸಿದ ಬಗ್ಗೆ ರಶೀದಿ/ಚಲನ್ ಪ್ರತಿಯನ್ನು ಈ ನ್ಯಾಯಾಲಯದ ಜಾಲತಾಣದಲ್ಲಿ ವಿವರಿಸಿದ ವಿಧಾನದಂತೆ "Upload" ಮಾಡತಕ್ಕದ್ದು.

7) ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ ವಿವರಗಳನ್ನು ಸರಿಯಾಗಿ ನಮೂದಿಸಲಾಗಿದೆಯೇ ಎಂಬುದನ್ನು ಖಚಿತಪಡಿಸಿಕೊಂಡ ನಂತರವೇ ಮಾತ್ರ *submit button press* ಮಾಡತಕ್ಕದ್ದು.

8) ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸುವುದು ಸೂಕ್ತ. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂತಿರುಗಿಸಲಾಗುವುದಿಲ್ಲ ಹಾಗೂ ಬೇರೆ ಯಾವುದೇ ನೇಮಕಾತಿಗೂ ಹೊಂದಾಣಿಕೆ ಮಾಡಿಕೊಳ್ಳುವುದಿಲ್ಲ.

9) ಅಭ್ಯರ್ಥಿಗಳು ನಿಗದಿಪಡಿಸಿದ ಶುಲ್ಕವನ್ನು ಚಲನ್ ಮುಖಾಂತರ ಪಾವತಿಸಲು ದಿನಾಂಕಃ 22-04-2022 ಕೊನೆಯ ದಿನವಾಗಿದ್ದು, ನಿಗದಿತ ಅವಧಿಯೊಳಗಾಗಿ ಭಾರತೀಯ ಸ್ಟೇಟ್ ಬ್ಯಾಂಕ್‌ನ ಯಾವುದೇ ಶಾಖೆಯ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು.

10) ಅರ್ಹತಾ ಪರೀಕ್ಷೆ / ಸಂದರ್ಶನದ ವೇಳಾಪಟ್ಟಿಯನ್ನು ನ್ಯಾಯಾಲಯದ ಜಾಲತಾಣ (website) **https://districts.ecourts.gov.in/bagalkot** ನೇದ್ದರಲ್ಲಿ ಪ್ರಕಟಿಸಲಾಗುವುದು. ಇದನ್ನು ಹೊರತುಪಡಿಸಿ ಪ್ರತ್ಯೇಕವಾಗಿ ಯಾವುದೇ ಕರೆಯೋಲೆಗಳನ್ನು ಅಭ್ಯರ್ಥಿಗಳಿಗೆ ಈ ಕಚೇರಿಯಿಂದ ರವಾನಿಸಲಾಗುವುದಿಲ್ಲ. ಸಂದರ್ಶನಕ್ಕೆ/ಅರ್ಹತಾ ಪರೀಕ್ಷೆಗೆ ಅರ್ಹರಾದ ಅಭ್ಯರ್ಥಿಗಳು ತಮ್ಮ ಅರ್ಹತಾ ಪರೀಕ್ಷೆ / ಸಂದರ್ಶನದ ದಿನಾಂಕವನ್ನು ತಿಳಿದುಕೊಳ್ಳಲು ಈ ನ್ಯಾಯಾಲಯದ ಜಾಲತಾಣವನ್ನು ಮೇಲಿಂದ ಮೇಲೆ ಗಮನಿಸತಕ್ಕದ್ದು.

11) ಈ ಕಚೇರಿಯಿಂದ ನಡೆಸುವ ಅರ್ಹತಾ ಪರೀಕ್ಷೆ / ಸಂದರ್ಶನದ ಬಗ್ಗೆ ಮಾಹಿತಿಯನ್ನು ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ಗೊತ್ತುಪಡಿಸಿದ ಚರವಾಣಿ (Mobile) ಸಂಖ್ಯೆಗೆ ವಿದ್ಯುನ್ಮಾನ ಸಂದೇಶದ (SMS ಅಥವಾ e-mail) ಮೂಲಕ ತಿಳಿಸಲಾಗುವುದು. ಒಂದು ವೇಳೆ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ನೇಮಕಾತಿ ಪ್ರಾಧಿಕಾರ ಹೊಣೆಯಾಗುವುದಿಲ್ಲ, ಆದ್ದರಿಂದ ಅಭ್ಯರ್ಥಿಗಳು ನ್ಯಾಯಾಲಯದ ಜಾಲತಾಣ (website) **https://districts.ecourts.gov.in/bagalkot** ನೇದ್ದನ್ನು ವೀಕ್ಷಿಸಿ ಅರ್ಹತಾ ಪರೀಕ್ಷೆ / ಸಂದರ್ಶನದ ಬಗ್ಗೆ ಮಾಹಿತಿಯನ್ನು ತಿಳಿದುಕೊಂಡು, ತಮ್ಮ ಒಂದು ಮೂಲ ಗುರುತಿನ ಚೀಟಿಯೊಂದಿಗೆ (ಚುನಾವಣಾ ಗುರುತಿನ ಚೀಟಿ / ಆಧಾರ್ ಕಾರ್ಡ್ / ವಾಹನ ಚಾಲನಾ ಪರವಾನಿಗೆ ಪತ್ರ / ಪಾನ್ ಕಾರ್ಡ್ / ಪಾಸ್ ಪೋರ್ಟ್) ಅರ್ಹತಾ ಪರೀಕ್ಷೆ / ಸಂದರ್ಶನಕ್ಕೆ ಹಾಜರಾಗತಕ್ಕದ್ದು.

## *06) <u>ಸಾಮಾನ್ಯ ಸೂಚನೆಗಳು</u> :-*

ಅಭ್ಯರ್ಥಿಗಳು ಸಂದರ್ಶನ / ದಾಖಲಾತಿ ಪರಿಶೀಲನೆ / ಈ ಕಚೇರಿಯು ಸಂದರ್ಭಾನುಸಾರ ಅಪೇಕ್ಷಿಸಿದ ಸಮಯದಲ್ಲಿ ಈ ಕೆಳಕಂಡ ಮೂಲ ದಾಖಲಾತಿಗಳನ್ನು ಹಾಜರುಪಡಿಸತಕ್ಕದ್ದು.

(1) ಆನ್‌ಲೈನ್ ಮೂಲಕ ಸಲ್ಲಿಸಲಾದ ಅರ್ಜಿಯ ಪ್ರತಿ.

(2) ನಿಗದಿಪಡಿಸಿದ ಶುಲ್ಕವನ್ನು ಪಾವತಿಸಿದ ರಶೀದಿ ಪ್ರತಿ.

(3) ಆಯಾ ಹುದ್ದೆಗಳಿಗೆ ನಿಗದಿಪಡಿಸಿದ ವಿದ್ಯಾರ್ಹತೆಗೆ ಸಂಬಂಧಿಸಿದ ಅಂಕಪಟ್ಟಿಗಳು

(4) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ, ಪ್ರವರ್ಗ-1, ಪ್ರವರ್ಗ – 2ಎ, 2ಬಿ, 3ಎ ಮತ್ತು 3ಬಿ ಸೇರಿದ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರರಿಂದ ಪಡೆದ ಚಾಲ್ತಿಯಲ್ಲಿರುವ ಜಾತಿ ಪ್ರಮಾಣಪತ್ರಗಳು.

(5) ಅಂಗವಿಕಲ(ವಿಕಲಚೇತನ) ಮೀಸಲಾತಿ ಕೋರುವ ಅಭ್ಯರ್ಥಿಗಳು ದಿನಾಂಕ: 19-05-2005 ರ ಸರಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ-115/ಸೇನೆನಿ/2005 ರಡಿಯಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪಡೆದ ಪ್ರಮಾಣ ಪತ್ರ.

(6) ಗ್ರಾಮೀಣ ಮೀಸಲಾತಿ ಕೋರುವ ಅಭ್ಯರ್ಥಿಗಳು ಸರಕಾರಿ ಆದೇಶ ಸಂಖ್ಯೆ: ಸಿಆಸುಇ/98/ಸೇನೆನಿ/2005, ದಿನಾಂಕ: 10-08-2005 ರ ಪ್ರಕಾರ ನಿಗದಿತ ನಮೂನೆ 2 ರಲ್ಲಿ ಸಂಬಂಧಪಟ್ಟ ಶಾಲೆಯಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾ ಧಿಕಾರಿಗಳಿಂದ ಮೇಲುರುಜು ಮಾಡಿಸಿದ 6 ತಿಂಗಳ ಒಳಗಿರುವ ಪ್ರಮಾಣಪತ್ರ.

(7) ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ 2 ರ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ 1 ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲ ದಿರುವ (Creamylayer) ಬಗ್ಗೆ ತಹಶೀಲ್ದಾರರವರಿಂದ ಪಡೆದ 6 ತಿಂಗಳ ಒಳಗಿರುವ ಪ್ರಮಾಣ ಪತ್ರ.

(8) ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಿಂದ 6 ತಿಂಗಳ ಒಳಗಿರುವ ಹಾಗೂ ಅರ್ಜಿದಾರರಿಗೆ ಸಂಬಂಧಿಕರಲ್ಲದ ಇಬ್ಬರು ಗಣ್ಯ ವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣ ಪತ್ರಗಳು.

(9) ಅಭ್ಯರ್ಥಿಯು ಅಭ್ಯಸಿಸಿದ ಶಾಲೆ / ವಿದ್ಯಾಲಯದಿಂದ ಪಡೆದ ನಡತೆ ಪ್ರಮಾಣ ಪತ್ರ.

(10) ಅಭ್ಯರ್ಥಿಯು ಕೋರಿರುವ ಮೀಸಲಾತಿಗಳನ್ನು (ಯೋಜನಾ ನಿರಾಶ್ರಿತ, ಮಾಜಿ ಸೈನಿಕ ಇತ್ಯಾದಿ) ಖಾತ್ರಿಪಡಿಸಲು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಿಗಳಿಂದ ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಪ್ರಮಾಣ ಪತ್ರ/ಸೂಕ್ತ ದಾಖಲೆ.

(11) ಆದೇಶ ಜಾರಿಕಾರ ಮತ್ತು ಸಿಪಾಯಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಯಸುವ ಅಭ್ಯರ್ಥಿಗಳಿಗೆ, 10 ನೇ ತರಗತಿಯಲ್ಲಿ ಪಡೆದ ಸರಾಸರಿ ಅಂಕಗಳ ಆಧಾರದ ಮೇಲೆ ಸಂದರ್ಶನದ ಅರ್ಹತಾ ಪಟ್ಟಿಯನ್ನು ತಯಾರಿಸಬೇಕಾಗಿರುವುದರಿಂದ ಶ್ರೇಣಿಗಳನ್ನು (ಗ್ರೇಡಿಂಗ್) ಹೊಂದಿದ ಅಂಕಪಟ್ಟಿ ಇರುವ ಅಭ್ಯರ್ಥಿಗಳು ಅದನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ನಿಖರವಾದ ಅಂಕಗಳನ್ನು ಪ್ರತಿಶತವನ್ನಾಗಿ (Percentage) ಪರಿವರ್ತಿಸಿಕೊಳ್ಳತಕ್ಕದ್ದು. ಹಾಗೆ ಪರಿವರ್ತಿಸಿಕೊಂಡ ಅಂಕಗಳು ಹಾಗೂ ಪ್ರತಿಶತ (Percentage) ಮಾತ್ರ ಆನ್‌ಲೈನ್ ಅರ್ಜಿಯಲ್ಲಿ ನಮೂದಿಸತಕ್ಕದ್ದು. ನಿಖರವಾಗಿ ಪಡೆದ ಅಂಕಗಳನ್ನು ಕ್ರೂಢೀಕರಿಸಿ ತಯಾರಿಸಲಾದ ಅಂಕಪಟ್ಟಿಯನ್ನು ಸಂದರ್ಶನ / ಈ ಕಚೇರಿ ಅಪೇಕ್ಷಿಸಿದಲ್ಲಿ ಹಾಜರಪಡಿಸತಕ್ಕದ್ದು. ಒಂದು ವೇಳೆ ಶ್ರೇಣಿಗಳನ್ನೊಳಗೊಂಡ ಅಂಕಪಟ್ಟಿಯನ್ನು ಸಂದರ್ಶನದ ಸಮಯದಲ್ಲಿ ಹಾಜರಪಡಿಸಿದ ಪಕ್ಷದಲ್ಲಿ ಅಂತಹ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಪರಿಗಣಿಸಲಾಗುವದಿಲ್ಲ.

(12) ಜನ್ಮ ದಿನಾಂಕವನ್ನು ದೃಢೀಕರಿಸಲು ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ ಅಥವಾ ವರ್ಗಾವಣೆ ಪ್ರಮಾಣ ಪತ್ರವನ್ನು ಹಾಜರಪಡಿಸತಕ್ಕದ್ದು.

(13) ಅರ್ಹತಾ ಪರೀಕ್ಷೆ ಮತ್ತು ಸಂದರ್ಶನಕ್ಕಾಗಿ ಆಹ್ವಾನಿಸಿದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಹಾಜರಾಗತಕ್ಕದ್ದು.

(14) ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಬಯಸುವವರು ಆಯಾ ಹುದ್ದೆಗಳಿಗೆ ಪ್ರತ್ಯೇಕವಾಗಿ ಅರ್ಜಿಗಳನ್ನು ಸಲ್ಲಿಸಬೇಕು ಮತ್ತು ಪ್ರತಿಯೊಂದು ಅರ್ಜಿಗೆ ಪ್ರತ್ಯೇಕವಾಗಿ ಶುಲ್ಕವನ್ನು ಭರಣಾ ಮಾಡಬೇಕು.

***ವಿಶೇಷ ಸೂಚನೆಗಳು :-***

01) ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಿದ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದುಕೊಂಡಿರತಕ್ಕದ್ದು. ಇಲ್ಲವೇ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು.

02) ಸರಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಸಂಬಂಧಪಟ್ಟ ಪ್ರಾಧಿಕಾರದಿಂದ "ನಿರಾಕ್ಷೇಪಣಾ ಪ್ರಮಾಣ ಪತ್ರ" ವನ್ನು ಈ ಅಧಿಸೂಚನೆಯಲ್ಲಿ ಅಧಿಸೂಚಿಸಿದ ಹುದ್ದೆಗಳಿಗೆ ಆಯ್ಕೆಯಾದ ಪಕ್ಷದಲ್ಲಿ, ಆಯ್ಕೆಪಟ್ಟಿ ಪ್ರಕಟವಾದ 30 ದಿನಗಳೊಳಗಾಗಿ ಪಡೆಯತಕ್ಕದ್ದು.

03) ಅಭ್ಯರ್ಥಿಗಳು ಅಭ್ಯರ್ಥಿಕೆಯ ಸಂಬಂಧದಲ್ಲಿ ಅಧಿಕಾರಿಗಳಿಂದ ಅಥವಾ ಅಧಿಕಾರೇತರರಿಂದ ಯಾವುದೇ ರೀತಿಯ ಬಾಹ್ಯ ಬೆಂಬಲವನ್ನು ಪಡೆಯುವ ಪ್ರಯತ್ನ ಮಾಡಿದಲ್ಲಿ ಅಂತಹ ಅಭ್ಯರ್ಥಿಗಳನ್ನು ಯಾವುದೇ ಮುನ್ಸೂಚನೆ ನೀಡದೇ ಅನರ್ಹಗೊಳಿಸಲಾಗುವುದು.

04) ಅಧಿಸೂಚನೆಯಲ್ಲಿ ನಮೂದಿಸಿದ ಹುದ್ದೆಗಳಿಗೆ ನಿಗದಿಪಡಿಸಿದ ವಿದ್ಯಾರ್ಹತೆಗೆ ಸಂಬಂಧಿಸಿದ ದಾಖಲಾತಿಗಳು ಮತ್ತು ವಿವಿಧ ಮೀಸಲಾತಿಗಳಿಗನುಸಾರವಾಗಿ ಅಭ್ಯರ್ಥಿಗಳು ಪಡೆದುಕೊಂಡ ಪ್ರಮಾಣಪತ್ರಗಳು, ಪರಿಶೀಲನೆಯ ಸಮಯದಲ್ಲಿ ಸುಳ್ಳೆಂದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿಕೆಯು ರದ್ದಾಗುತ್ತದೆ ಮತ್ತು ಅಂತಹವರ ವಿರುದ್ಧ ತಪ್ಪು ಮಾಹಿತಿಯನ್ನು ಒದಗಿಸಿರುವುದಕ್ಕೆ ಸಂಬಂಧಿಸಿದಂತೆ ಕ್ರಿಮಿನಲ್ ವ್ಯವಹರಣೆಯನ್ನು ಜರುಗಿಸಲಾಗುವುದು.

05) ಅರ್ಹತಾ ಪರೀಕ್ಷೆ / ಸಂದರ್ಶನ ಯಶಸ್ವಿಯಾದ ಮಾತ್ರಕ್ಕೆ ನೇಮಕಾತಿಯ ಯಾವುದೇ ಹಕ್ಕು ಖಾತ್ರಿಯಾಗತಕ್ಕದ್ದಲ್ಲ ಹಾಗೂ ಆ ಹುದ್ದೆಯ ನೇಮಕಾತಿಗೆ ಸಂಬಂಧಿಸಿದಂತೆ ಅಗತ್ಯವೆಂದು ಪರಿಗಣಿಸಬಹುದಾದಂತಹ ಪರಿಶೀಲನೆಗಳನ್ನು ಮಾಡಿದ ನಂತರ ಅಭ್ಯರ್ಥಿಗಳು ಎಲ್ಲಾ ಆಯಾಮಗಳಲ್ಲೂ ಅರ್ಹರಾಗಿದ್ದಾರೆಂದು ಈ ನೇಮಕಾತಿ ಪ್ರಾಧಿಕಾರಕ್ಕೆ ಮನವರಿಕೆಯಾಗದ ಹೊರತು ಅಭ್ಯರ್ಥಿಯನ್ನು ಆ ಹುದ್ದೆಗೆ ನೇಮಕ ಮಾಡಿಕೊಳ್ಳಲಾಗುವುದಿಲ್ಲ.

06) ವಿಕಲಚೇತನರು / ಮಾಜಿ ಸೈನಿಕರು / ವಿಧವೆಯರು ವಯೋಮಿತಿ ಸಡಿಲಿಕೆಗಾಗಿ ಸಕ್ಷಮ ಪ್ರಾಧಿಕಾರಿಗಳು ನೀಡಿದ ಪ್ರಮಾಣ ಪತ್ರಗಳನ್ನು ಹೊಂದಿರತಕ್ಕದ್ದು.

07) ಮಹಿಳಾ ಅಭ್ಯರ್ಥಿಗಳು, ವಿಕಲಚೇತನ ಅಭ್ಯರ್ಥಿಗಳು, ಯೋಜನಾ ನಿರಾಶ್ರಿತರು, ಕನ್ನಡ ಮಾಧ್ಯಮ, ಗ್ರಾಮೀಣ ಅಭ್ಯರ್ಥಿಗಳಿಗೆ, ಮಾಜಿ ಸೈನಿಕರಿಗೆ ಮೀಸಲಿರಿಸಿದ ರಿಕ್ತ ಸ್ಥಾನಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದ ಪಕ್ಷದಲ್ಲಿ ಆಯಾ ವರ್ಗಕ್ಕೆ ಸೇರಿದ ಇತರೆ ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡಿಕೊಳ್ಳಲಾಗುವುದು.

08) ವಿಕಲಚೇತನರಿಗೆ ಮೀಸಲಾದ ಹುದ್ದೆಗಳಿಗೆ ಅಧಿಸೂಚಿಸಿರುವ ಅಂಗವಿಕಲತೆ ಹೊಂದಿರುವ ಅಭ್ಯರ್ಥಿಗಳು ಲಭ್ಯವಿಲ್ಲದೇ ಇದ್ದಲ್ಲಿ ಅಂತಹ ರಿಕ್ತ ಸ್ಥಾನಗಳನ್ನು ಮುಂದಿನ ನೇಮಕಾತಿಗೆ ಮುಂದೊಯ್ಯಲಾಗುವುದು.

09) ನೇಮಕಾತಿ ಪ್ರಕ್ರಿಯೆಯಲ್ಲಿ ಈ ನೇಮಕಾತಿ ಪ್ರಾಧಿಕಾರವು ನಿಯಮಾವಳಿಗನುಸಾರ ತೆಗೆದುಕೊಳ್ಳುವ ನಿರ್ಧಾರವೇ ಅಂತಿಮವಾಗಿರುತ್ತದೆ.

10) ಅರ್ಹತಾ ಪರೀಕ್ಷೆ / ಸಂದರ್ಶನದ ದಿನಾಂಕವನ್ನು ಮಾರ್ಪಡಿಸುವ/ರದ್ದುಪಡಿಸುವ ಅಧಿಕಾರವನ್ನು ಈ ನೇಮಕಾತಿ ಪ್ರಾಧಿಕಾರವು ಕಾಯ್ದಿರಿಸಿಕೊಂಡಿರುತ್ತದೆ.

11) ಈ ನೇಮಕಾತಿ ಪ್ರಾಧಿಕಾರವು ಅರ್ಹತಾ ಪರೀಕ್ಷೆಗೆ / ಸಂದರ್ಶನಕ್ಕೆ ನಿಗಧಿಪಡಿಸಿದ ದಿನಾಂಕವು ರಜೆ ಎಂದು ಘೋಷಿಸಿದ್ದಲ್ಲಿ, ಅಂತಹ ಅರ್ಹತಾ ಪರೀಕ್ಷೆ / ಸಂದರ್ಶನದ ದಿನಾಂಕವನ್ನು ಮರು ನಿಗಧಿಪಡಿಸಲಾಗುವುದು.

ಸಹಿ/-
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬಾಗಲಕೋಟೆ

<u>ಪ್ರತಿಯನ್ನು *ಗೌರವಗಳೊಂದಿಗೆ ಅನುಮೋದನೆಗಾಗಿ :*</u>

1) ಮಹಾ ವಿಲೇಖನಾಧಿಕಾರಿಗಳು, ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು, ಇವರಿಗೆ ಮುಖಪತ್ರದೊಂದಿಗೆ

<u>ಪ್ರಕಟಣೆಯ ನಕಲನ್ನು ಪ್ರಕಟಿಸುವ ಕುರಿತು :-</u>

1) ಪ್ರಧಾನ ನಗರ ಸಿವ್ಹಿಲ್ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು, ಇವರಿಗೆ ರವಾನಿಸುತ್ತಾ ಸದರೀ ಅಧಿಸೂಚನೆಯ ಪ್ರತಿಯನ್ನು ತಮ್ಮ ನ್ಯಾಯಾಲಯದ ಸೂಚನಾ ಫಲಕದಲ್ಲಿ ಅಳವಡಿಸಿ ವ್ಯಾಪಕವಾಗಿ ಪ್ರಚುರಪಡಿಸಲು ಕೋರಲಾಗಿದೆ.

2) ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಗ್ರಾಮೀಣ : ಬೆಳಗಾವಿ : ಬಳ್ಳಾರಿ : ಬೀದರ : ವಿಜಯಪುರ : ಚಾಮರಾಜನಗರ : ಚಿಕ್ಕಮಗಳೂರು : ಚಿಕ್ಕಬಳ್ಳಾಪುರ : ಚಿತ್ರದುರ್ಗ: ದಾವಣಗೆರೆ : ಧಾರವಾಡ : ಗದಗ : ಕಲಬುರಗಿ : ಹಾಸನ : ಹಾವೇರಿ : ಕೋಲಾರ : ಕೊಪ್ಪಳ : ಕೊಡಗು-ಮಡಿಕೇರಿ : ಮಂಡ್ಯ : ಮೈಸೂರು : ಮಂಗಳೂರು : ರಾಯಚೂರು : ರಾಮನಗರ : ಶಿವಮೊಗ್ಗ : ತುಮಕೂರು : ಉಡುಪಿ : ಉತ್ತರ ಕನ್ನಡ : ಯಾದಗಿರಿ ಇವರಿಗೆ ರವಾನಿಸುತ್ತಾ ಸದರೀ ಅಧಿಸೂಚನೆಯ ಪ್ರತಿಯನ್ನು ತಮ್ಮ ನ್ಯಾಯಾಲಯದ ಸೂಚನಾ ಫಲಕದಲ್ಲಿ ಅಳವಡಿಸಿ ವ್ಯಾಪಕವಾಗಿ ಪ್ರಚುರಪಡಿಸಲು ಕೋರಲಾಗಿದೆ.

3) ನಿರ್ದೇಶಕರು, ವಾರ್ತಾ, ಪ್ರಚಾರ ಮತ್ತು ಪ್ರವಾಸೋದ್ಯಮ ಇಲಾಖೆ, ಬೆಂಗಳೂರು, ಇವರಿಗೆ ಸಾದಿಲ್ವಾರು ವೆಚ್ಚ ಕೈಪಿಡಿ ನಿಯಮ 55 (ಬಿ) (ಡಿ) ಪ್ರಕಾರ 2 ಹೆಚ್ಚು ಪ್ರಸಾರ ಉಳ್ಳ ಕನ್ನಡ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಕಟಿಸಿ ಪ್ರಕಟಣೆಯ 5 ಪ್ರತಿಗಳನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಲು ಕೋರಲಾಗಿದೆ.

4) ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ, ಸರಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು- 560 059, ಇವರಿಗೆ ಪ್ರಕಟಣೆಯನ್ನು ಮುಂದಿನ ರಾಜ್ಯಪತ್ರದಲ್ಲಿ ಉಚಿತವಾಗಿ ಪ್ರಕಟಿಸಿ ಪ್ರಕಟಣೆಯ 5 ಪ್ರತಿಗಳನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಲು ಕೋರಲಾಗಿದೆ.

5) ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ ಅಧಿಕಾರಿಗಳು, ಬಾಗಲಕೋಟೆ ಇವರಿಗೆ ರವಾನಿಸುತ್ತಾ, ಸ್ಥಳೀಯ ಕನ್ನಡ ದಿನಪತ್ರಿಕೆಗಳಲ್ಲಿ ಈ ನೇಮಕಾತಿ ಅಧಿಸೂಚನೆಯನ್ನು ಉಚಿತವಾಗಿ ಪ್ರಕಟಿಸಿ, ಪ್ರಕಟಣೆಯ 5 ಪ್ರತಿಗಳನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಲು ಕೋರಲಾಗಿದೆ.

6) ಜಿಲ್ಲಾಧಿಕಾರಿಗಳು, ಬಾಗಲಕೋಟೆ ಜಿಲ್ಲೆ, ಬಾಗಲಕೋಟೆ ಇವರಿಗೆ ರವಾನಿಸುತ್ತಾ ಸದರೀ ಅಧಿಸೂಚನೆಯ ಪ್ರತಿಯನ್ನು ತಮ್ಮ ಕಚೇರಿಯ ಸೂಚನಾ ಫಲಕದಲ್ಲಿ ಅಳವಡಿಸಿ ವ್ಯಾಪಕವಾಗಿ ಪ್ರಚುರಪಡಿಸಲು ಕೋರಲಾಗಿದೆ.

7) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ, ಬಾಗಲಕೋಟೆ ಇವರಿಗೆ ರವಾನಿಸುತ್ತಾ ಸದರೀ ಅಧಿಸೂಚನೆಯ ಪ್ರತಿಯನ್ನು ತಮ್ಮ ಕಚೇರಿಯ ಸೂಚನಾ ಫಲಕದಲ್ಲಿ ಅಳವಡಿಸಿ ವ್ಯಾಪಕವಾಗಿ ಪ್ರಚುರಪಡಿಸಲು ಕೋರಲಾಗಿದೆ.

8) ಜಿಲ್ಲಾ ಪೊಲೀಸ್ ಅಧೀಕ್ಷಕರು, ಬಾಗಲಕೋಟೆ ಜಿಲ್ಲೆ, ಬಾಗಲಕೋಟೆ ಇವರಿಗೆ ರವಾನಿಸುತ್ತಾ ಸದರೀ ಅಧಿಸೂಚನೆಯ ಪ್ರತಿಯನ್ನು ತಮ್ಮ ಕಚೇರಿಯ ಸೂಚನಾ ಫಲಕದಲ್ಲಿ ಅಳವಡಿಸಿ ವ್ಯಾಪಕವಾಗಿ ಪ್ರಚುರಪಡಿಸಲು ಕೋರಲಾಗಿದೆ.

9) ಜಿಲ್ಲಾ ಖಜಾನಾ ಅಧಿಕಾರಿಗಳು, ಬಾಗಲಕೋಟೆ ಜಿಲ್ಲೆ, ಬಾಗಲಕೋಟೆ ಇವರಿಗೆ ರವಾನಿಸುತ್ತಾ ಸದರೀ ಅಧಿಸೂಚನೆಯ ಪ್ರತಿಯನ್ನು ತಮ್ಮ ಕಚೇರಿಯ ಸೂಚನಾ ಫಲಕದಲ್ಲಿ ಅಳವಡಿಸಿ ವ್ಯಾಪಕವಾಗಿ ಪ್ರಚುರಪಡಿಸಲು ಕೋರಲಾಗಿದೆ.

10) ಜಿಲ್ಲಾ ಉದ್ಯೋಗ ಅಧಿಕಾರಿಗಳು, ಬಾಗಲಕೋಟೆ ಜಿಲ್ಲೆ, ಬಾಗಲಕೋಟೆ ಇವರಿಗೆ ಸದರೀ ಅಧಿಸೂಚನೆಯ ಪ್ರತಿಯನ್ನು ತಮ್ಮ ಕಚೇರಿಯ ಸೂಚನಾ ಫಲಕದಲ್ಲಿ ಅಳವಡಿಸಿ ವ್ಯಾಪಕವಾಗಿ ಪ್ರಚುರಪಡಿಸಲು ಹಾಗೂ ಮಾಹಿತಿಗಾಗಿ ರವಾನಿಸಲಾಗಿದೆ.

11) ಬಾಗಲಕೋಟೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲ ನ್ಯಾಯಾಲಯಗಳ ಪೀಠಾಸೀನಾಧಿಕಾರಿಗಳಿಗೆ ರವಾನಿಸುತ್ತಾ ಸದರೀ ಅಧಿಸೂಚನೆಯ ಪ್ರತಿಯನ್ನು ತಮ್ಮ ತಮ್ಮ ನ್ಯಾಯಾಲಯದ ಸೂಚನಾ ಫಲಕದಲ್ಲಿ ಅಳವಡಿಸಿ ವ್ಯಾಪಕವಾಗಿ ಪ್ರಚುರಪಡಿಸಲು ಕೋರಲಾಗಿದೆ.

12) ಈ ಕಚೇರಿಯ ಸೂಚನಾ ಫಲಕಕ್ಕೆ.